ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಮಂಗಳವಾರ, ದಿನಾಂಕ : 23ನೇ ಜುಲೈ, 2019

ಕೆ.ಆರ್.ಐ.ಡಿ.ಎಲ್. ನಿಂದ ಕೈಗೊಂಡ ಕಾಮಗಾರಿಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

490 (675) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆಯಲ್ಲಿ ಕೆ.ಆರ್.ಐ.ಡಿ.ಎಲ್. ನಿಂದ ಕಳೆದ 05 ವರ್ಷಗಳಿಂದ ಕೈಗೊಂಡಿರುವ ಕಾಮಗಾರಿಗಳು ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇವುಗಳಲ್ಲಿ ಪೂರ್ಣಗೊಂಡಿರುವ ಕಾಮಗಾರಿಗಳು ಎಷ್ಟು; ಹಾಗೂ ಬಳಕೆಯಾದ ಅನುದಾನವೆಷ್ಟು; (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

(ಇ) ಪೂರ್ಣಗೊಂಡ ಕಾಮಗಾರಿಗಳ ಗುಣಮಟ್ಟ ಪರಿಶೀಲಿಸಿದ ಏಜೆನ್ಸಿ ಯಾವುದು (ಕಿ.ಅ.) ಹಾಗೂ ಏಜೆನ್ಸಿಯವರು ನೀಡಿದ ವರದಿಯ ಪ್ರತಿಗಳನ್ನು ಕಾಮಗಾರಿವಾರು ನೀಡುವುದು;

(ಈ) ಕೆ.ಆರ್.ಐ.ಡಿ.ಎಲ್. ವತಿಯಿಂದ ನಿರ್ವಹಿಸಿದ ಮತ್ತು ನಿರ್ವಹಿಸುತ್ತಿರುವ ಕಾಮಗಾರಿಗಳು ಕಳಪೆ ಗುಣಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕಳಪೆ ಕಾಮಗಾರಿಗಳನ್ನು ನಿರ್ವಹಿಸಿರುವವರ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ವಿವರವಾದ ಮಾಹಿತಿ ನೀಡುವುದು)